ನೆಲಮಂಗಲ ಯೋಜನಾ ಪ್ರಾಧಿಕಾರ

2ನೇ ಮುಖ್ಯರಸ್ತೆ, ಸದಾಶಿವನಗರ, ನೆಲಮಂಗಲ-562123. ದೂರವಾಣಿ: 9663046622 ಇ-ಮೇಲ್: nelamangala.pa@gmail.com

ಸಂಖ್ಯೆ: ಅನಧಿಕೃತ ಬಡಾವಣೆ/ಸಾರ್ವಜನಿಕ ಪ್ರಕಟಣೆ/01/2023-24 ದಿನಾಂಕ: 21-07-2022

ಸಾರ್ವಜನಿಕ ಪ್ರಕಟಣೆ

ವಿಷಯ: ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅನಧಿಕೃತ ಬಡಾವಣೆಗಳಲ್ಲಿ ನಿವೇಶನ ಖರೀದಿಸಬಾರದೆಂದು ಸಾರ್ವಜನಿಕರಿಗೆ ನೀಡುತ್ತಿರುವ ಪ್ರಕಟಣೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಎ(1) ರನ್ವಯ ಸರ್ಕಾರದ ಆದೇಶ ಸಂ. ನಅಇ 63 ಟಿಟಿಪಿ 96, ದಿನಾಂಕ: 27-01-1997 ರಲ್ಲಿ ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಲಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4 (ಸಿ) ರನ್ವಯ ಸರ್ಕಾರದ ಆದೇಶ ಸಂಖ್ಯೆ: ನಅಇ 204 ಟಿಟಿಪಿ 97 ದಿನಾಂಕ: 14-07-1997 ರಲ್ಲಿ ನೆಲಮಂಗಲ ಯೋಜನಾ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ.

ಅದರಂತೆ, ನೆಲಮಂಗಲ ತಾಲ್ಲೂಕಿನ ನೆಲಮಂಗಲ ನಗರವನ್ನು ಒಳಗೊಂಡಂತೆ, ಕಸಬಾ, ತ್ಯಾಮಗೊಂಡ್ಲು ಮತ್ತು ಸೋಂಪುರ ಹೋಬಳಿಗಳ ಒಟ್ಟು 205 ಗ್ರಾಮಗಳು ಮತ್ತು ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿಯ 42 ಗ್ರಾಮಗಳು ಮಾಗಡಿ ತಾಲ್ಲೂಕು, ಸೋಲೂರು ಹೋಬಳಿಯ 31 ಗ್ರಾಮಗಳು ಮತ್ತು ಕುದೂರು ಹೋಬಳಿಯ 03 ಗ್ರಾಮಗಳು ಸೇರಿ ಪ್ರಸ್ತುತ ಈ ಪ್ರಾಧಿಕಾರವು ಒಟ್ಟು 281 ಗ್ರಾಮಗಳನ್ನು ಒಳಗೊಂಡಿದ್ದು, 585.35 ಚ.ಕಿ.ಮೀ. ವಿಸ್ತೀರ್ಣದ ವ್ಯಾಪ್ತಿಯ ಪ್ರದೇಶವನ್ನು ಹೊಂದಿರುತ್ತದೆ.

ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದ ಆದೇಶ ಸಂಖ್ಯೆ: ನಅಇ 150 ಬಿಎಂಆರ್ 2013, ದಿನಾಂಕ: 01-06-2015 ರಲ್ಲಿ ಮಹಾಯೋಜನೆ - 2031 (ಅಂತಿಮ) ಅನ್ನು ಅನುಮೋದಿಸಲಾಗಿದ್ದು, ಸದರಿ ಮಹಾಯೋಜನೆಯಂತೆ ಭೂ ಉಪಯೋಗಗಳು ಹಾಗೂ ವಲಯ ನಿಯಮಾವಳಿಗಳು ಚಾಲ್ತಿಯಲ್ಲಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಅನುಸಾರ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಕೈಗೊಳ್ಳಬೇಕಾಗಿದ್ದಲ್ಲಿ ಕೆ.ಟಿ.ಸಿ.ಪಿ ಕಾಯ್ದೆ 1961 ರಡಿಯಲ್ಲಿ ನೆಲಮಂಗಲ ಯೋಜನಾ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆ.

ಈ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅಭಿವೃದ್ಧಿ ಪಡಿಸಿರುವ ಬಡಾವಣೆಗಳಲ್ಲಿ ಸಾರ್ವಜನಿಕರು ನಿವೇಶನ ಖರೀದಿಸುವ ಮೊದಲು ನೆಲಮಂಗಲ ಯೋಜನಾ ಪ್ರಾಧಿಕಾರದಿಂದ ಕೆ.ಟಿ.ಸಿ.ಪಿ ಕಾಯ್ದೆಯಡಿ ಬಡಾವಣೆ ನಕ್ಷೆಗೆ ಅನುಮೋದನೆ ಪಡೆದಿರುವ ಹಾಗೂ ನಿವೇಶನಗಳನ್ನು ನೋಂದಣಿಗೆ ಬಿಡುಗಡೆ ಆಗಿರುವ ಮತ್ತು ವಸತಿ ಸಮುಚ್ಚಯ / ವಾಣಿಜ್ಯ ಸಮುಚ್ಚಯ / ಕೈಗಾರಿಕಾ / ವೇರ್‌ಹೌಸ್ ಕಟ್ಟಡಗಳಿಗೆ ನಕ್ಷೆ ಅನುಮೋದನೆ ಪಡೆದಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರ ಖರೀದಿಸಲು ತಿಳಿಸಲಾಗಿದೆ.

ಈ ಕಛೇರಿಯಿಂದ ಅನುಮೋದನೆ ಪಡೆಯದೇ ಅನಧಿಕೃತವಾಗಿ ನಿರ್ಮಿಸಿರುವ ವಿನ್ಯಾಸ / ಬಡಾವಣೆಗಳಲ್ಲಿನ ನಿವೇಶನ ಮತ್ತು ವಸತಿ ಸಮುಚ್ಚಯ / ವಾಣಿಜ್ಯ ಸಮುಚ್ಚಯ / ಕೈಗಾರಿಕಾ / ವೇರ್‌ಹೌಸ್ ಕಟ್ಟಡಗಳನ್ನು ಖರೀದಿಸಬಾರದೆಂದು ಈ ಮೂಲಕ ತಿಳಿಯಪಡಿಸಲಾಗಿದೆ. ಅನಧಿಕೃತ ವಸತಿ ವಿನ್ಯಾಸ / ಬಡಾವಣೆಗಳಲ್ಲಿ ಖರೀದಿಸಿದಂತಹ ನಿವೇಶನಗಳಿಗೆ ನೆಲಮಂಗಲ ಯೋಜನಾ ಪ್ರಾಧಿಕಾರದ ವತಿಯಿಂದ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಅನುಮೋದನೆ / ಪ್ರಾರಂಭಿಕ ಪ್ರಮಾಣ ಪತ್ರಗಳನ್ನು ನೀಡಲಾಗುವುದಿಲ್ಲ ಹಾಗೂ ಕಟ್ಟಡ ನಿರ್ಮಾಣ ಇತ್ಯಾದಿಗಳಿಗೆ ಸರ್ಕಾರದ ವತಿಯಿಂದ ದೊರೆಯಬಹುದಾದ ಸೌಲಭ್ಯಗಳು ಲಭ್ಯವಾಗುವುದಿಲ್ಲ. ಅಲ್ಲದೆ, ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಬಡಾವಣೆಗಳಲ್ಲಿ ಎಲ್ಲಾ ರೀತಿಯ ಮೂಲ ಸೌಲಭ್ಯಗಳನ್ನು ಅಭಿವೃದ್ಧಿದಾರರೇ ಅಭಿವೃದ್ಧಿಪಡಿಸಿ ಸಾರ್ವಜನಿಕರಿಗೆ ಒದಗಿಸಬೇಕಾಗಿರುತ್ತದೆ ಹಾಗೂ ಸದರಿ ಮೂಲ ಸೌಲಭ್ಯಗಳನ್ನು ಕಾಲಕಾಲಕ್ಕೆ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಂದ ನಿರ್ವಹಿಸಲಾಗುತ್ತದೆ ಎಂಬ ಮಾಹಿತಿಯನ್ನು ಈ ಮೂಲಕ ಸಾರ್ವಜನಿಕರ ಗಮನಕ್ಕೆ ಪ್ರಾಧಿಕಾರವು ತರಬಯಸುತ್ತದೆ ಹಾಗೂ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಿಸಲಾದ ಬಡಾವಣೆಯಲ್ಲಿನ ನಿವೇಶನಗಳನ್ನು ಮತ್ತು ಅನಧಿಕೃತವಾಗಿ ನಿರ್ಮಿಸಲಾದ ವಸತಿ ಸಮುಚ್ಚಯ / ವಾಣಿಜ್ಯ ಸಮುಚ್ಚಯ / ಕೈಗಾರಿಕಾ ನಿವೇಶನಗಳಲ್ಲಿ ಕಟ್ಟಲಾದ ಕಟ್ಟಡಗಳನ್ನು ಖರೀದಿಸಬಾರದು ಮತ್ತು ಭೋಗ್ಯ / ಬಾಡಿಗೆ ಇತ್ಯಾದಿಗಳ ಮೂಲಕ ಸ್ವಾಧೀನಕ್ಕೆ ಪಡೆಯಬಾರದೆಂದು ಈ ಪ್ರಕಟಣೆ ಮೂಲಕ ತಿಳಿಯಪಡಿಸಿದೆ. ಒಂದು ವೇಳೆ ಸಾರ್ವಜನಿಕರು ಖರೀದಿಸಿ ಮೋಸ ಹೋದಲ್ಲಿ ಇದರಿಂದ ಉಂಟಾಗುವ ನಷ್ಟ / ತೊಂದರೆಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಲ್ಲವೆಂದು ಸ್ಪಷ್ಟವಾಗಿ ತಿಳಿಯಪಡಿಸಲಾಗಿದೆ.

ನೆಲಮಂಗಲ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಭೂ ಮಾಲೀಕರು / ಅಭಿವೃದ್ಧಿದಾರರು ಕೆ.ಟಿ.ಸಿ.ಪಿ ಕಾಯ್ದೆ, 1961 ಕಲಂ 17 ರಡಿಯಲ್ಲಿ ಈ ಪ್ರಾಧಿಕಾರದಿಂದ ವಿನ್ಯಾಸ ಅನುಮೋದನೆ ಪಡೆಯದೇ ಬಡಾವಣೆಯನ್ನು ಅನಧಿಕೃತವಾಗಿ ಅಭಿವೃದ್ಧಿಪಡಿಸಿ ಸಾರ್ವಜನಿಕರಿಗೆ ಮಾರಾಟ ಮಾಡುವುದು ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಡಿಯಲ್ಲಿ ವಿನ್ಯಾಸದ ಮಾಲೀಕರು / ಅಭಿವೃದ್ಧಿದಾರರು / ಜೆ.ಡಿ.ಎ. ದಾರರು / ಜಮೀನಿನ ಮಾಲೀಕರ ಮೇಲೆ ಕಾನೂನಿನ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳುವಳಿಕೆ ನೀಡಲಾಗಿದೆ.

ಸಹಿ/- ಜಂಟಿ ನಿರ್ದೇಶಕರು

ನಗರ ಮತ್ತು ಗ್ರಾಮಾಂತರ ಯೋಜನೆ ಹಾಗೂ ಸದಸ್ಯ-ಕಾರ್ಯದರ್ಶಿ,
ನೆಲಮಂಗಲ ಯೋಜನಾ ಪ್ರಾಧಿಕಾರ, ನೆಲಮಂಗಲ.

ವಾಸಾಸಂ/ವಾ.ಪ್ರ/648/ಅಡ್ವರ್ಟೋ/2023-24

Published for the Proprietors, Metropolitan Media Company Limited, by R.J. Prakashan at No. 74/2, Sanjana Plaza, 4th & 5th Floor, Elephant Rock Road, Bangalore - 560 099 (Ph: 080-42200500) Regd. Office: No. 74/2, Sanjana Plaza, 4th & 5th Floor, Elephant Rock Road, Jayanagar 3rd block, Bangaluru-560